# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಮಂಗಳೂರಿನ ಪಿ.ಎ. ಪಾಲಿಟೆಕ್ನಿಕ್ ಸಂಸ್ಥೆಗೆ 2015-16ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸುವ ಬಗ್ಗೆ-

-----

**ಓದಲಾಗಿದೆ:-**

1. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಡಿಟಿಇ 27 ಡಿವಿಪಿ (2) 2014, ದಿನಾಂಕ:02-02-2015.
2. ಸರ್ಕಾರದ ಆದೇಶ ಸಂಖ್ಯೆ: ಇಡಿ 136 ಟಿಪಿಇ 2013, ದಿನಾಂಕ:19-08-2013.
3. ಸರ್ಕಾರದ ಆದೇಶ ಸಂಖ್ಯೆ: ಇಡಿ 131 ಟಿಪಿಇ 2014, ದಿನಾಂಕ:20-08-2014.

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರ.ಸಂ.(1)ರ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು, ಪಿ.ಎ. ಪಾಲಿಟೆಕ್ನಿಕ್ (ಅನುದಾನಿತ), ಮಂಗಳೂರು ಈ ಸಂಸ್ಥೆಗೆ ಮೇಲೆ ಓದಲಾದ ಕ್ರ.ಸಂ.(2)ರ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮಂಜೂರು ಮಾಡಲಾಗಿರುತ್ತದೆಂದು ತಿಳಿಸಿರುತ್ತಾರೆ.

ಮುಂದುವರೆದು, ಮೇಲೆ ಓದಲಾದ ಕ್ರ.ಸಂ.(3)ರ ಆದೇಶದಲ್ಲಿ ರಾಜ್ಯ ಸರ್ಕಾರವು ತಾಂತ್ರಿಕ ಶಿಕ್ಷಣ ಸಂಸ್ಥೆಗಳಿಗೆ ಅಲ್ಪಸಂಖ್ಯಾತ ಸ್ಥಾನಮಾನವನ್ನು ನೀಡಲು / ನವೀಕರಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ರೂಪಿಸಿದ್ದು, ಈ ಮಾರ್ಗಸೂಚಿಗಳ ಪ್ರಕಾರ ಈಗಾಗಲೇ ಅಲ್ಪಸಂಖ್ಯಾತ ಸ್ಥಾನಮಾನವನ್ನು ಹೊಂದಿರುವ ತಾಂತ್ರಿಕ ಶಿಕ್ಷಣ ಸಂಸ್ಥೆಗಳು ಸದರಿ ಸ್ಥಾನಮಾನವನ್ನು ಮುಂದುವರೆಸಲು ಕೋರಿ, ಪೀರ್ಯಾಡಿಕಲ್ ರಿಪೋರ್ಟ್‌ನ್ನು ಸಲ್ಲಿಸಬೇಕಾಗಿದ್ದು, ಅದರಂತೆ ಮಂಗಳೂರಿನ ಪಿ.ಎ. ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಯು ಈ ಬಗ್ಗೆ ಪೀರ್ಯಾಡಿಕಲ್ ರಿಪೋರ್ಟ್‌ನ್ನು ಸಲ್ಲಿಸಿರುವುದರಿಂದ ಸದರಿ ಸಂಸ್ಥೆಗೆ 2015-16ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ವಿಸ್ತರಿಸಬಹುದಾಗಿದೆ ಎಂದು ನಿರ್ದೇಶಕರು ಶಿಫಾರಸ್ಸು ಮಾಡಿ ಈ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸಬೇಕೆಂದು ಕೋರಿರುವ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 62 ಟಿಪಿಇ 2015.**
**ಬೆಂಗಳೂರು, ದಿನಾಂಕ:08ನೇ ಜೂನ್ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಂಗಳೂರಿನ ಪಿ.ಎ (ಅನುದಾನಿತ) ಪಾಲಿಟೆಕ್ನಿಕ್‌ಗೆ 2015-16ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಈ ಕೆಳಕಂಡ ಷರತ್ತುಗೊಳಪಡಿಸಿ ವಿಸ್ತರಿಸಲಾಗಿದೆ.

1. ಸದರಿ ಪಾಲಿಟೆಕ್ನಿಕ್‌ಗೆ 2015-16ನೇ ಸಾಲಿಗೆ ನಿಗದಿಪಡಿಸಲಾದ ಪ್ರತಿ ಕೋರ್ಸಿನ ಇನ್‌ಟೇಕ್‌ನಲ್ಲಿ ಶೇ.50 ರಷ್ಟನ್ನು ಸರ್ಕಾರದ ಮೀಸಲಾತಿ ಆದೇಶದನ್ವಯ ನೋಡಲ್ ಸೆಂಟರ್ ಮೂಲಕ ಪ್ರವೇಶಾತಿ ನೀಡಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ತುಂಬತಕ್ಕದ್ದು.

2. ಈ ಪಾಲಿಟೆಕ್ನಿಕ್‌ನ ಆಡಳಿತ ಮಂಡಳಿಯ 2/3 ರಷ್ಟು ಸದಸ್ಯರು ಮತೀಯ ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರಾಗಿರಬೇಕು.

3. ಪ್ರತಿ ಕೋರ್ಸಿನ ಶೇ.50ರಷ್ಟು ಸೀಟುಗಳನ್ನು ಆಡಳಿತ ಮಂಡಳಿಯ ನಡೆಸಲ್ಪಡುತ್ತಿರುವ ಸಮುದಾಯ ವಿದ್ಯಾರ್ಥಿಗಳಿಂದ ತುಂಬಬೇಕಾಗಿದ್ದು, ಅದರಲ್ಲಿ ಶೇ.75 ರಷ್ಟು ಸೀಟುಗಳನ್ನು ಕರ್ನಾಟಕ ರಾಜ್ಯದಲ್ಲಿನ ಸದರಿ ಸಂಸ್ಥೆಯು ನಡೆಸಲ್ಪಡುತ್ತಿರುವ ಸಮುದಾಯದ ಅಭ್ಯರ್ಥಿಗಳಿಂದ ತುಂಬತಕ್ಕದ್ದು.

4. 2016-17ನೇ ಸಾಲಿನಲ್ಲಿ ಮತೀಯ ಅಲ್ಪಸಂಖ್ಯಾತ ಸ್ಥಾನಮಾನವನ್ನು ಮುಂದುವರೆಸುವ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಇಡಿ 131 ಟಿಪಿಇ 2014, ದಿ:20-08-2014ರಲ್ಲಿ ತಿಳಿಸಿರುವ ಮಾರ್ಗಸೂಚಿಗಳಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

8/6/15

(ಬಿ.ನಾಗಭೂಷಣ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

ಗೆ:

1. ತಾಂತ್ರಿಕ ಶಿಕ್ಷಣ ನಿರ್ದೇಶಕರು, ಬೆಂಗಳೂರು
2. ಕಾರ್ಯದರ್ಶಿಗಳು, ತಾಂತ್ರಿಕ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು
3. ಕಾರ್ಯದರ್ಶಿಗಳು, ಪಿ.ಎ. ಅನುದಾನಿತ ಪಾಲಿಟೆಕ್ನಿಕ್, ಮೋಂಟೆ ಪಾದರ್ ಅಂಚೆ, ಕೈರಂಗಲ ಹಳ್ಳಿ, ಬಂಟ್ವಾಳ, ಮಂಗಳೂರು-574153.
4. ಪ್ರಾಂಶುಪಾಲರು, ಪಿ.ಎ. ಅನುದಾನಿತ ಪಾಲಿಟೆಕ್ನಿಕ್, ಮಂಗಳೂರು (ತಾಂತ್ರಿಕ ಶಿಕ್ಷಣ ನಿರ್ದೇಶಕರ ಮುಖಾಂತರ)
5. ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿ

ಹಿಂಬರಹ ಸಂಖ್ಯೆ: ಡಿಟಿಇ 27 ಡಿವಿಪಿ(2) 2014 ದಿನಾಂಕ: 25/06/2015.

ಸರ್ಕಾರದ ಆದೇಶದ ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಪಟ್ಟ ಈ ಕೆಳಕಂಡ ಅಧಿಕಾರಿಗಳಿಗೆ ಹಾಗೂ ವಿಭಾಗಗಳಿಗೆ ಕಳುಹಿಸಲಾಗಿದೆ.

01. ಅಧ್ಯಕ್ಷರು / ಕಾರ್ಯದರ್ಶಿಗಳು, ಪಿ.ಎ. [redacted] ಪಾಲಟೆಕ್ನಿಕ್, ಮೋಂಟೆ ಪಾದರ್ ಅಂಚೆ, ಕೈರಂಗಲ ಹಳ್ಳಿ, ಬಂಟ್ವಾಳ, ಮಂಗಳೂರು-574153.
02. ಪ್ರಿನ್ಸಿಪಾಲರು, ಪಿ.ಎ. [redacted] ಪಾಲಟೆಕ್ನಿಕ್, ಮೋಂಟೆ ಪಾದರ್ ಅಂಚೆ, ಕೈರಂಗಲ ಹಳ್ಳಿ, ಬಂಟ್ವಾಳ, ಮಂಗಳೂರು-574153
03. ಜಂಟಿ ನಿರ್ದೇಶಕರು [ಆಡಳಿತ/ಪರೀಕ್ಷೆ/ತನಿಖೆ/ಎಟಿಎಸ್]
04. ಉಪ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ]
05. ಸಹಾಯಕ ನಿರ್ದೇಶಕರು [ಯೋಜನೆ/ಪರೀಕ್ಷೆ/ತನಿಖೆ/ಎಲ್‌ಪಿಸಿ]
06. ಸಂಖ್ಯಾಧಿಕಾರಿಗಳಿಗೆ
07. ಆಡಳಿತಾಧಿಕಾರಿಗಳಿಗೆ
08. ರಿಜಿಸ್ಟ್ರಾರ್ (ಪರೀಕ್ಷೆ/ಎಸಿಎಂ)
09. ಅಧೀಕ್ಷಕರು, ಎಸಿಎಂ ವಿಭಾಗ
10. ಕಾರ್ಯನಿರ್ವಾಹಕರು, ಎಸಿಎಂ(2) ವಿಭಾಗ
11. ಸರ್ಕಾರಿ ಆದೇಶಗಳ ಕಡತಕ್ಕೆ
12. ಈ ಗೌರ್‌ನೆನ್ಸ್ ಸೆಲ್‌ಗೆ

ಜಂಟಿ ನಿರ್ದೇಶಕರು (ಎಟಿಎಸ್)